ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಒಂಭತ್ತನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 24ನೇ ಮಾರ್ಚ್, 2021

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೇಳನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೇಳನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಕೆ. ರಘುಪತಿ ಭಟ್ (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 2019-20ನೇ ಸಾಲಿನ 9ನೇ ವರದಿಯನ್ನೊಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

1) 2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ

ಹಾಗೂ

1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು

2) 2020-21ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು

... 2/ ..

4. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಶ್ರೀ ಎಸ್.ಟಿ. ಸೋಮಶೇಖರ್ (ಮಾನ್ಯ ಸಹಕಾರ ಸಚಿವರು) ಅವರು:–

ಅ) 2021ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಕೆ.ಆರ್. ರಮೇಶ್ ಕುಮಾರ್, ಕೃಷ್ಣಬೈರೇಗೌಡ, ಡಾ. ಅಜಯ್ ಧರ್ಮಸಿಂಗ್, ಹೆಚ್.ಪಿ. ಮಂಜುನಾಥ್ ಹಾಗೂ ಇತರರು** – ರಾಜ್ಯದಲ್ಲಿ ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಮತ್ತು ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಸಿದ್ದರಾಮಯ್ಯ, ರಾಜಶೇಖರ ಬಸವರಾಜ ಪಾಟೀಲ್, ಎನ್.ಹೆಚ್. ಶಿವಶಂಕರ ರೆಡ್ಡಿ, ಪಿ.ಟಿ. ಪರಮೇಶ್ವರ್ ನಾಯ್ಕ ಹಾಗೂ ಇತರರು** – ರಾಜ್ಯದಲ್ಲಿ ಪದೇ–ಪದೇ ಗಣಿ ಸಂಬಂಧಿಸಿದ ಸ್ಫೋಟಗಳು ಸಂಭವಿಸುತ್ತಿರುವುದರಿಂದ ಅಮಾಯಕರು ಮರಣ ಹೊಂದುತ್ತಿದ್ದು, ಅಪಾರ ಪ್ರಮಾಣದ ಆಸ್ತಿ ಪಾಸ್ತಿಗಳಿಗೆ ಹಾನಿ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

... 3/ ..

3) **ಶ್ರೀಯುತರುಗಳಾದ ಕೆ.ಆರ್. ರಮೇಶ್ ಕುಮಾರ್, ವಿ. ಮುನಿಯಪ್ಪ, ಎನ್.ಹೆಚ್. ಶಿವಶಂಕರ ರೆಡ್ಡಿ, ಕೆ.ವೈ. ನಂಜೇಗೌಡ, ಎಸ್.ಎನ್. ಸುಬ್ಬಾರೆಡ್ಡಿ, ಎಸ್.ಎನ್. ನಾರಾಯಣಸ್ವಾಮಿ ಅವರುಗಳು** – ಕೋಲಾರ ಜಿಲ್ಲೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಎಂ.ವಿ.ಕೆ. ಗೋಲ್ಡನ್ ಡೈರಿ ಕಾರ್ಯದ ವಿಳಂಬದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

1) **ಶ್ರೀ ದೊಡ್ಡನಗೌಡ ಜಿ. ಪಾಟೀಲ್ ಇವರು** – "ಹುನಗುಂದ ತಾಲ್ಲೂಕಿನ ಮರೋಳ ಏತ ನೀರಾವರಿ ಯೋಜನೆ ಎರಡನೇ ಹಂತದ ಕಳಪೆ ಕಾಮಗಾರಿ" ಕುರಿತು ದಿನಾಂಕ:09.03.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2) **ಶ್ರೀ ಎ.ಟಿ. ರಾಮಸ್ವಾಮಿ ಇವರು** – "ರಾಜ್ಯದಲ್ಲಿನ ಕುಡಿಯುವ ನೀರಿನ ಸಮಸ್ಯೆ" ಕುರಿತು ದಿನಾಂಕ:15.03.2021ರಂದು ಶೂನ್ಯವೇಳೆಯಡಿ ಪ್ರಸ್ತಾಪಿಸಿರುವುದಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3) **ಶ್ರೀ ಬಂಡೆಪ್ಪ ಕಾಶೆಂಪೂರ್ ಇವರು** – "ವಿದ್ಯುತ್ ಸಂಪರ್ಕ" ಕುರಿತು ದಿನಾಂಕ:09.03.2021ರಂದು ಏಳನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 94(1231)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4) **ಶ್ರೀಮತಿ ರೂಪಕಲಾ ಎಂ. ಇವರು** – ಕೋಲಾರ ಜಿಲ್ಲೆಯ ಕೆ.ಜಿ.ಎಫ್. ನಲ್ಲಿ "ನಿರುಪಯುಕ್ತ ಜಮೀನನ್ನು ಸ್ವಾಧೀನಪಡಿಸಿಕೊಂಡು ಕೈಗಾರಿಕೆಗಳನ್ನು ಸ್ಥಾಪಿಸುವುದು" ಎಂಬ ವಿಷಯದ ಕುರಿತು ದಿನಾಂಕ:19.03.2021 ರಂದು ಹದಿನಾಲ್ಕನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 200(3267)ಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

... 4/ ..

7. ಗಮನ ಸೆಳೆಯುವ ಸೂಚನೆಗಳು

1) **ಡಾ. ಹೆಚ್.ಡಿ. ರಂಗನಾಥ್ ಅವರು** – ರಾಜ್ಯದ ರೈತರಿಗೆ 3 ಫೇಸ್ ವಿದ್ಯುತ್ ಅನ್ನು 7 ಗಂಟೆ ಅವಧಿಗೆ ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಶ್ರೀ ಎಂ.ವೈ. ಪಾಟೀಲ ಅವರು** – ಅಫಜಲಪುರ ತಾಲ್ಲೂಕಿನ ಗಾಣಗಪುರದಲ್ಲಿ ಕುಡಿಯುವ ನೀರಿಗಾಗಿ ಕಟ್ಟಲಾಗಿರುವ ಬ್ಯಾರೇಜ್‌ನ ಗೇಟ್‌ಗಳು ಹಳೆಯದಾಗಿದ್ದು, ನೀರು ಸೋರಿಕೆಯಾಗುತ್ತಿರುವುದರಿಂದ, ಹೊಸದಾಗಿ ಹೈಡ್ರೋಲಿಕ್ ಗೇಟ್ ಅಳವಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ಶರತ್ ಬಚ್ಚೇಗೌಡ ಅವರು** – ರಾಜ್ಯದಲ್ಲಿ ಪೊಲೀಸ್ ಇಲಾಖೆ ವತಿಯಿಂದ ದಾಖಲಾಗುವ ರೌಡಿ ಶೀಟರ್ ಪಟ್ಟಿಗೆ ಸೇರಿಸಲು ನಿಗದಿಪಡಿಸಿರುವ ಮಾನದಂಡಗಳ ಬಗ್ಗೆ ಹಾಗೂ ಅಮಾಯಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

4) **ಶ್ರೀ ಡಿ.ಎಸ್. ಸುರೇಶ್ ಅವರು** – ತರೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭದ್ರಾ ಮೇಲ್ದಂಡೆ ಯೋಜನೆಯಡಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದ್ದು, ಈ ಸಂಬಂಧ ರೈತರ ಜಮೀನಿಗೆ ನಿಗದಿಪಡಿಸಿರುವ ದರಗಳಲ್ಲಿ ಉಂಟಾಗಿರುವ ವ್ಯತ್ಯಾಸವನ್ನು ಸರಿಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ಬಂಡೆಪ್ಪ ಖಾಶೆಂಪೂರ ಅವರು** – ಬೀದರ್ ಜಿಲ್ಲೆಯ ಅತಿವಾಳ ಮತ್ತು ಸುತ್ತಮುತ್ತ ಗ್ರಾಮಗಳಲ್ಲಿ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ ರೈತರ ಜಮೀನುಗಳಿಗೆ ಕಾಡುಪ್ರಾಣಿಗಳು ಪ್ರವೇಶಿಸದಂತೆ ತಂತಿ ಬೇಲಿಯನ್ನು ಅಳವಡಿಸುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಯತೀಂದ್ರ ಸಿದ್ದರಾಮಯ್ಯ ಅವರು** – ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಅತಿಥಿ ಉಪನ್ಯಾಸಕರುಗಳನ್ನು ಸೇವೆಯಲ್ಲಿ ವಿಲೀನಗೊಳಿಸಲು ತೀರ್ಮಾನ ತೆಗೆದುಕೊಳ್ಳುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ) ಗಮನ ಸೆಳೆಯುವುದು.

7) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಸಿವಿಲ್ ಕಾನ್ಸ್‌ಟೇಬಲ್ ನೇಮಕಾತಿಯಲ್ಲಿ ಐ.ಟಿ.ಐ., ಡಿಪ್ಲೊಮಾ ಮತ್ತು ಜೆ.ಓ.ಸಿ. ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವಲ್ಲಿ ಆಗಿರುವ ತಾರತಮ್ಯದ ಬಗ್ಗೆ ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

... 5/ ..

8) **ಶ್ರೀ ಟಿ. ರಘುಮೂರ್ತಿ ಅವರು** – ಚಳ್ಳಕೆರೆ ವಿಧಾನಸಭಾ ಕ್ಷೇತ್ರ ತುರುವನೂರು ಹೋಬಳಿ ಕೇಂದ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಂ.ಎಸ್. ಸೋಮಲಿಂಗಪ್ಪ ಅವರು** – ಬಳ್ಳಾರಿ ಜಿಲ್ಲೆಯ ವಿವಿಧ ತಾಲ್ಲೂಕಿನ ರೈತರ ಜಮೀನುಗಳಿಗೆ ನೀರು ಹರಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10) **ಡಾ. ಕೆ. ಶ್ರೀನಿವಾಸಮೂರ್ತಿ ಅವರು** – ನೆಲಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪುರಸಭೆಯನ್ನು ನಗರ ಸಭೆಯಾಗಿ ಮೇಲ್ದರ್ಜೆಗೇರಿಸಿದ್ದು, ಇಲ್ಲಿನ ಒಳಚರಂಡಿ ನಿರ್ಮಾಣ ಕಾಮಗಾರಿಯ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

11) **ಶ್ರೀ ಎನ್. ಮಹೇಶ್ ಅವರು** – ಸಾರ್ವಜನಿಕ ಆಸ್ಪತ್ರೆಗಳಲ್ಲಿ ಸಾಮಾನ್ಯ ಕರ್ತವ್ಯಾಧಿಕಾರಿಗಳನ್ನು ನೇಮಕ ಮಾಡುವ ಮೂಲಕ ಸಾರ್ವಜನಿಕರಿಗೆ ತಜ್ಞ ವೈದ್ಯರ ಸೇವೆ ಸಮರ್ಪಕವಾಗಿ ಸಿಗುವಂತೆ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

12) **ಶ್ರೀ ಬಿ.ಕೆ. ಸಂಗಮೇಶ್ವರ್ ಅವರು** – ಭದ್ರಾವತಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದವರು ಸರ್ಕಾರಿ ಜಾಗದಲ್ಲಿ ನಿರ್ಮಿಸಿಕೊಂಡಿರುವ ಮನೆಗಳಿಗೆ 94ಸಿ ಯೋಜನೆಯಡಿ ಹಕ್ಕುಪತ್ರಗಳನ್ನು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

13) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆಯ ಕಟ್ಟಾಯ, ಹೆತ್ತೂರು ಮತ್ತು ಮಗ್ಗೇಗ್ರಾಮಗಳು ಹೋಬಳಿ ಕೇಂದ್ರಗಳಾಗಿದ್ದು, ಮಿನಿ ಬಸ್ ನಿಲ್ದಾಣ ತೆರೆಯುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಸಾರಿಗೆ) ಗಮನ ಸೆಳೆಯುವುದು.

14) **ಶ್ರೀ ಸಿದ್ದು ಸವದಿ ಅವರು** – ರಾಜ್ಯದಲ್ಲಿ ಜಮೀನುಗಳಲ್ಲಿ ವಾಸಮಾಡುವ ಕುಟುಂಬದವರಿಗೆ ನಿರಂತರ ಜ್ಯೋತಿ ಯೋಜನೆಯನ್ನು ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

15) **ಶ್ರೀ ಅಭಯ ಪಾಟೀಲ್ ಅವರು** – ಬೆಳಗಾವಿ ತಾಲ್ಲೂಕಿನ ಮಚ್ಚೇಗ್ರಾಮದ ಸರ್ಕಾರಿ ಜಮೀನಿನಲ್ಲಿ ಐತಿಹಾಸಿಕ ವ್ಯಕ್ತಿಗಳ ಸ್ಮಾರಕಗಳ ಮಾದರಿಗಳನ್ನು ನಿರ್ಮಿಸುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)